ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ವಸತಿ ಯೋಜನೆಯಡಿ ಇರುವ ಯೋಜನೆಗಳು

ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

1114 (1299) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಸತಿ ಯೋಜನೆಯಡಿ ಫಲಾನುಭವಿಗಳು ಮನೆಗಳನ್ನು ಪಡೆದುಕೊಳ್ಳಲು ಇರುವ ಸರ್ಕಾರದ ಯೋಜನೆಗಳಾವುವು ; (ಕ್ಷೇತ್ರವಾರು ವಿವರ ನೀಡುವುದು)

(ಆ) ಈ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಮತ್ತು ಜನ ಸಾಮಾನ್ಯರಿಗೆ ತಲುಪಿಸಲು ಸರ್ಕಾರವು ಕ್ಷಿಪ್ರಗತಿಯಲ್ಲಿ ಕಾರ್ಯೋನ್ಮುಖವಾಗಿದೆಯೇ ; ಹಾಗಿದ್ದಲ್ಲಿ, ಸದರಿ ಯೋಜನೆಗಳ ಲಾಭ ಪಡೆದುಕೊಂಡ ಫಲಾನುಭವಿಗಳೆಷ್ಟು ;

(ಇ) ವಸತಿ ಯೋಜನೆಯಡಿ ಬರುವ ಹಲವು ಯೋಜನೆಗಳು ಜನ ಸಾಮಾನ್ಯರ ಗಮನಕ್ಕೆ ತರುವಲ್ಲಿ ಸರ್ಕಾರವು ಕ್ರಮ ಕೈಗೊಂಡಿದೆಯೆ;

(ಈ) ವಸತಿ ಯೋಜನೆಗಳಲ್ಲಿ ದುರುಪಯೋಗ ಕಂಡುಬಂದಿದೆಯೇ; ಹಾಗಿದ್ದಲ್ಲಿ, ಈ ಯೋಜನೆಗಳನ್ನು ದುರ್ಲಾಭ ಮಾಡಿಕೊಳ್ಳುತ್ತಿರುವವರ ವಿರುದ್ಧ ಸರ್ಕಾರವು ಕಠಿಣ ಕ್ರಮ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಮುಂಬರುವ ದಿನಗಳಲ್ಲಿ ದುರ್ಲಾಭವನ್ನು ತಡೆಗಟ್ಟಲು ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು ;

(ಉ) ಪ್ರತಿಯೊಬ್ಬರಿಗೂ ಗೂಡನ್ನು ಒದಗಿಸುವಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ; ಕಾಲಮಿತಿ ಎಷ್ಟು ; ಇದುವರೆವಿಗೂ ಎಷ್ಟು ಜನರಿಗೆ ಗೂಡನ್ನು ಒದಗಿಸುವಲ್ಲಿ ಸರ್ಕಾರವು ಸ